# ಬೆಳಗಾವಿಯ ಅಭಿವೃದ್ಧಿಗೆ ಶೆಟ್ಟರ ಆಯ್ಕೆ ಅಗತ್ಯ: ಡಾ.ಪ್ರಭಾಕರಕೋರೆ

## ಕೆಎಲ್ಇ ಅಂಗಳದಲ್ಲಿ ಜಗದೀಶ್ ಶೆಟ್ಟರ ಪರ ಮತಯಾಚನೆ

ಬೆಳಗಾವಿ : ಭಾರತವನ್ನುಜಗತ್ತು ನೋಡುವಂತೆ ಮಾಡಿದ್ದರೆಅದು ಪ್ರಧಾನ ನರೇಂದ್ರ ಮೋದಿಜಿಯವರು. ಅವರ ದಿಟ್ಟ ಹಾಗೂ ಪ್ರಖರವಾದ ಯೋಜನೆಗಳು, ದೇಶದ ಆರ್ಥಿಕತೆಯನ್ನು ಬದಲಾಯಿಸಿದೆ. ಭಾರತ ವಿಶ್ವ ಪ್ರಬಲ ರಾಷ್ಟ್ರವಾಗಿ ಹೊರ ಹೊಮ್ಮಿದೆ. ಅಂತಹ ಪ್ರಧಾನ ಈ ದೇಶಕ್ಕೆ ಮತ್ತೊಮ್ಮೆ ಬೇಕು. ಅವರ ಆಡಳಿತದಲ್ಲಿ ಬೆಳಗಾವಿಯಿಂದ ಜಗದೀಶ್ ಶೆಟ್ಟರ ಪ್ರಚಂಡ ಬಹುಮತದಿಂದಆಯ್ಕೆ ಮಾಡಿ ಕಳುಹಿಸುವುದು ನಮ್ಮೆಲ್ಲರ'ಜವಾಬ್ದಾರಿ ಎಂದು ಕೆಎಲ್ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರಕೋರೆಯವರು ಹೇಳಿದರು.

ಅವರು ಬೆಳಗಾವಿಯ ಕೆಎಲ್ಇ ಸಂಸ್ಥೆಯಜೆಎನ್ಎಂಸಿ ಆವರಣದ ಸಿಬ್ಬಂದಿವರ್ಗ ಹಾಗೂ ಲಿಂಗರಾಜಕಾಲೇಜಿನಆವರಣದಲ್ಲಿ ಸಿಬ್ಬಂದಿವರ್ಗದವರನ್ನುಭೇಟಿಯಾಗಿ ಶೆಟ್ಟರಅವರ ಪರವಾಗಿ ಮತಯಾಚಿಸಿದರು.

ಕೆಎಲ್ಇ ನೂರು ವರ್ಷಗಳ ತನ್ನಚರಿತ್ರೆಯಲ್ಲಿಘಟಾನುಘಟಿ ರಾಜಕಾರಣಿಗಳನ್ನು ಬೆಳೆಸಿದೆ. ಸಪ್ತರ್ಷಿಗಳು ಕೂಡ ಶಿಕ್ಷಕ ಮತಕ್ಷೇತ್ರವನ್ನು ಪ್ರತಿನಧಿಸಿ ಆರಿಸಿ ಬಂದಿದ್ದರು. ಇಂದು ನಮ್ಮ ಸಂಸ್ಥೆಯ ಹಳೆಯ ವಿದ್ಯಾರ್ಥಿಯಾಗಿರಾಜ್ಯದ ಮುಖ್ಯಮಂತ್ರಿ ಹುದ್ದೆಯನ್ನು ನರ್ವಹಿಸಿದ್ದ ಶೆಟ್ಟರಅವರು ಸಂಸ್ಥೆಗಾಗಿ ಹಾಗೂ ನಾಡಿಗೆ ಬಹುಮೌಲಿಕವಾದ ಕೊಡುಗೆಯನ್ನು ನೀಡಿದ್ದಾರೆ. ಅವರಅಭಿವೃದ್ಧಿ ಕೆಲಸ ಕಾರ್ಯಗಳು ಇಂದಿಗೂ ಮಹತ್ವಪೂರ್ಣವೆನಸಿವೆಕೊಂಡಿವೆ. ಅವರು ನಮ್ಮವರು, ಎಲ್ಲಕ್ಕೂ ಮುಖ್ಯವಾಗಿ ಬೆಳಗಾವಿಯ ಅಭಿವೃದ್ಧಿಗಾಗಿ ದಶಕಗಳಿಂದ ಕೈಜೋಡಿಸುತ್ತಾ ಬಂದಿದ್ದಾರೆ. ಮೋದಿಜೀಯವರ ಸಮರ್ಥ ನೇತೃತ್ವದಲ್ಲಿಜರುಗಿರುವ ಲೋಕಸಭಾಚುನಾವಣೆಯಲ್ಲಿ ಭಾರತೀಯಜನತಾ ಪಕ್ಷ ಬಹುಮತದಿಂದಅಧಿಕಾರದಚುಕ್ಕಾಣಿಯನ್ನು ಹಿಡಿದರೆದೇಶಚಿತ್ರಣ ಬದಲಾಗುವುದರಲ್ಲಿ ಸಂದೇಹವಿಲ್ಲ. ದೇಶಇಂದುಜಗತ್ತಿನ ಪ್ರಬಲ ಆರ್ಥಿಕಕ್ಷೇತ್ರದಲ್ಲಿ ಗುರುತಿಸಿಕೊಂಡಿದೆ. ನಮ್ಮ ವೈರಿ ರಾಷ್ಟ್ರಗಳು ಭಾರತವನ್ನುಕಂಡು ಹೆದುರುತ್ತಿವೆ. ಮೊದಲಿನ ಪರಿಸ್ಥಿತಿ ಇಂದಿಲ್ಲ. ಭಾರತತಲೆಎತ್ತಿ ನಂತಿದೆ. ಕಳೆದ ಒಂದುದಶಕದಲ್ಲಿ ವಿಶ್ವದ ಪ್ರಬಲ ರಾಷ್ಟ್ರವಾಗಿರೂಪುಗೊಂಡಿದೆಇದೆಲ್ಲ ಸಾಧ್ಯವಾದದ್ದು ನರೇಂದ್ರ ಮೋದಿಜಿಯವರಿಂದಎಂಬುದನ್ನುಅರಿಯಬೇಕು. ಪ್ರಜ್ಞಾವಂತರಾದ ನಾವು ಮತದಾನವನ್ನು ಮಾಡಬೇಕು. ಉತ್ತಮವಾದ ವ್ಯಕ್ತಿಯನ್ನುಆಯ್ಕೆ ಮಾಡಬೇಕು. ನಮ್ಮ ಮತ ಮಾನ್ಯಜಗದೀಶ ಶೆಟ್ಟರಅವರಿಗೆಇರಲೆಂದು ಸಭಿಕರಿಗೆ ವಿನಂತಿಸಿಕೊಂಡರು. ಇದೇ ಸಂದರ್ಭದಲ್ಲಿ ಬೆಳಗಾವಿ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ ಮಾತನಾಡಿ, ನಾನು ಕೂಡಕೆಎಲ್ಇ ವಿದ್ಯಾರ್ಥಿಯಾಗಿದ್ದು, ಬೆಳಗಾವಿಯ ಸಮಗ್ರಅಭಿವೃದ್ಧಿಗೆ ಶ್ರಮವಹಿಸುತ್ತೇನೆ. ಬೆಳಗಾವಿಯೂ ಕೂಡ ನನಗೆ ಅಳ್ಳೆಮುಖ್ಯ. ಇದರಅಭಿವೃದ್ಧಿಗೆಆದ್ಯತೆ ನೀಡುತ್ತೇನೆ. ದಕ್ಷಿಣಕರ್ನಾಟಕ ಸಾಕಳ್ಳುಅಭಿವೃದ್ಧಿಯಾಗಿದೆ. ಅಧಿವೇಶನಕ್ಕೆ ಕೆಎಲ್ಇ ಕೊಡುಗೆ ಅನನ್ಯ. ಬೆಳಗಾವಿ ಅಭಿವೃದ್ಧಿ ನನ್ನಅಭಿಲಾಳೆಎಂದುಹೇಳಿದರು.

ಸುವರ್ಣಸೌಧಕ್ಕೆಅನುಮತಿ ನೀಡಿ ಭೂಮಿಪೂಜೆ ಮಾಡಿದ್ದು ನಾನೆ. ಬೆಳಗಾವಿ ಜೊತೆ ನನ್ನದು ಅವಿನಾಭಾವ ಸಂಬಂಧ. ನಾನು ಹೊರಗಿನವರುಎನ್ನಬೇಡಿ. ನನಗೂ ಅವಕಾಶ ಕೊಡಿ. ಬೆಳಗಾವಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೆನೆ.ಯಾವುದೇಕಾರಣಕ್ಕೂ ಬೆಳಗಾವಿಯನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳೆಸುವದು, ರೇಲ್ವೆ ಹಾಗೂ ವಿಮಾನ ನಲ್ದಾಣವನ್ನುಅಂತರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೆ ಏರಿಸಲಾಗುವದು ಎಂದು ಹೇಳಿದರು.

ಪ್ರಧಾನ ಮೋದಿ ಅವರ ಮುಂದಾಳತ್ವದಲ್ಲಿ ಭಾರತ ವಿಶ್ವದಲ್ಲಿಯೇ ಪ್ರಮುಖರಾಷ್ಟ್ರವಾಗಿಆರ್ಥಿಕತೆಯಲ್ಲಿ ಸಬಲತೆಯನ್ನು ಹೊಂದುತ್ತಿದೆ. ಅವರ ಯೋಜನೆಗಳು ದೇಶಕ್ಕೆ ಭದ್ರವಾದ ಬುನಾದಿಯನ್ನು ಹಾಕಿವೆ. ಅವರ ಹೆಸರುಜನಮಾಸದಲ್ಲಿ ಬೆರೆತುಹೋಗಿದೆ. ಭ್ರಷ್ಟರಹಿತವಾಗಿ ಆಡಳಿತವನ್ನು ನಡೆಸಿದ್ದಾರೆ. ಒಂದೇಒಂದುಕಪ್ಪುಚುಕ್ಕೆಇಲ್ಲದೆ ವ್ಯಕ್ತಿತ್ವಅವರದು. ಅಂತಹ ನಾಯಕ ಸಾರಥ್ಯದಲ್ಲಿ ಭಾರತೀಯಜನತಾ ಪಕ್ಷ ಮುನ್ನಡೆಯುತ್ತಿದೆ. ನಾನೂ ಕೂಡಕೆಎಲ್ಇ ಸಂಸ್ಥೆಯ ಹಳೆಯ ವಿದ್ಯಾರ್ಥಿ, ಕೆಎಲ್ಇ ಸಂಸ್ಥೆಯು ಅನೇಕ ರಾಷ್ಟ್ರ ನಾಯಕರನ್ನು ಬೆಳೆಸಿದೆ. ನಮ್ಮೆಲ್ಲ ಆಶೀರ್ವಾದ ನನ್ನ ಮೇಲೆ ಇರಲೆಂದು ಹೇಳಿದರು.

ಈ ಸಂದರ್ಭದಲ್ಲಿಕೆಎಲ್ಇ ನರ್ದೇಶಕರು, ಮಾಜಿ ವಿಧಾನ ಪರಿಷತ್ ಸದಸ್ಯರಾದ ಮಹಾಂತೇಶಕವಟಗಿಮಠ, ಕೆಎಲ್ಇ ಕಾರ್ಯದರ್ಶಿಗಳಾದ ಡಾ.ಬಿ.ಜಿ.ದೇಸಾಯಿ,ಕಾಹೆರ್‌ನ ಉಪಕುಲಪತಿಡಾ.ನತಿನ್ ಗಂಗಾನೆ, ಡಾ.ಎಚ್.ಎಸ್.ಮೇಲಿನಮನ ಉಪಸ್ಥಿತರಿದ್ದರು. ಕೆಎಲ್ಇ ಸಿಬ್ಬಂದಿವರ್ಗದವರು ಪಾಲ್ಗೊಂಡಿದ್ದರು.

# ಬೆಳಗಾವಿ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ: ಜಗದೀಶ್ ಶೆಟ್ಟರ್

ಬೆಳಗಾವಿ: ಮೋದಿಯವರು ಮತ್ತೊಮ್ಮೆ ಪ್ರಧಾನ ಆದರೆ ಕಾಮನ್ ಸಿವಿಲ್ ಕೋರ್ಟ್ ದೇಶಾದ್ಯಂತ ಜಾರಿಗೆ ತರುತ್ತೇವೆ. ಅಧಿಕಾರಕ್ಕೆ ಬಂದ ಮೇಲೆ ಮುಂದಿನ ಐದು ವರ್ಷದ ಕೆಲಸಗಳು ಮೊದಲೇ ಜಾರಿಗೆ ತಂದು, ಭ್ರಷ್ಟಾಚಾರ ರಹಿತ ಆಡಳಿತ ಮಾಡುತ್ತೇವೆ. ನಾನು ಲೋಕಸಭೆಗೆ ಆಯ್ಕೆ ಆದರೆ ಬೆಳಗಾವಿ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ತಿಳಿಸಿದರು.

ಶುಕ್ರವಾರ ಬೆಳಗಾವಿ ಕೋರ್ಟ್ ಆವರಣದಲ್ಲಿ ಇರುವ ವಕೀಲರ ಸಂಘದ ಸಭಾ ಭವನದಲ್ಲಿ ಆಯೋಜನೆ ಮಾಡಲಾಗಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ನಾನು ಯಾವುದಾದರೂ ಯೋಜನೆ ಹಾಕಿಕೊಂಡರೆ ಅದನ್ನು ಕಾರ್ಯರೂಪಕ್ಕೆ ತಂದೆ ತರುತ್ತೇನೆ. ಹುಬ್ಬಳ್ಳಿ ಮಾದರಿಯಲ್ಲಿ ಬೆಳಗಾವಿಯಲ್ಲೂ ಕೂಡಾ ಕೋರ್ಟ್ ಆವರಣ ಅಭಿವೃದ್ಧಿ ಪಡಿಸಲಾಗುವುದು ಎಂದು ಭರವಸೆ ನೀಡಿದರು.

ನಾನು ರಾಜಕಾರಣಿ ಎನ್ನುವುದಕ್ಕಿಂತ ನಾನೊಬ್ಬ ವಕೀಲ. ಇಡೀ ರಾಜ್ಯದಲ್ಲಿ ದೊಡ್ಡದಾದ ಬಾರ್ ಅಸೋಸಿಯೇಷನ್ ಅಂದರೆ ಅದು ಬೆಳಗಾವಿ ಬಾರ್ ಅಸೋಸಿಯೇಷನ್. 15 ವರ್ಷ ಹುಬ್ಬಳ್ಳಿ – ಧಾರವಾಡ ಕೋರ್ಟ್ ನಲ್ಲಿ ವಕೀಲನಾಗಿ ತರಬೇತಿ ಪಡೆದಿದ್ದೇನೆ. 1994 ರಲ್ಲಿ ಶಾಸಕನಾದಾಗಿ ಕೇಲಸದ ಒತ್ತಡದಲ್ಲಿ ತರಬೇತಿ ಮುಂದು ವರೆಸಲು ಆಗಲಿಲ್ಲ ಎಂದು ತಿಳಿಸಿದರು.

ನ್ಯಾಯಾಲಯ ಆವರಣ ಎಂದರೆ ಎಲ್ಲ ವರ್ಗದ ಜನರು ಬಂದೆ ಬರುತ್ತಾರೆ. ವಕೀಲರಾಗಿ ತರಬೇತಿ ಪಡೆಯುವರು ಸಾಕಷ್ಟು ಜನ ಸಚಿವರಾಗಿದ್ದಾರೆ, ಮುಖ್ಯಮಂತ್ರಿಗಳು ಆಗಿದ್ದಾರೆ. ಈ ಲೋಕಸಭಾ ಕ್ಷೇತ್ರದಲ್ಲಿ ನಾನು ಸ್ಪರ್ಧೆ ಮಾಡುತ್ತಿದ್ದೇನೆ. ಈ ಹಿಂದೆ ವಕೀಲರು ಎಲ್ಲರೂ ನಮ್ಮ ಪಕ್ಷಕ್ಕೆ ಬೆಂಬಲ ನೀಡಿದ್ದಂತೆ ನನಗು ಬೆಂಬಲ ನೀಡಿಬೇಕು. ವಕೀಲರ ಸಮಸ್ಯೆ ಕುರಿತು ವಿಧಾನ ಸಭೆಯಲ್ಲಿ ಸಾಕಷ್ಟು ಸಲ ಧ್ವನಿ ಎತ್ತಿದ್ದೇನೆ. 1994 ರಲ್ಲಿ ಮೋದಲ ಬಾರಿ ಶಾಸಕನಾದಾಗ ವಕೀಲರೆ ನಂತು, ಕಾರ್ಯಕರ್ತಾರಾಗಿ ಕೆಲಸ ಮಾಡಿದ್ದಾಗ ನಾನು ಜಯಗಳಿಸಿದೆ ಎಂದು ಹೇಳಿದರು.

ದೂರ ದೃಷ್ಟಿ ಇಟ್ಟುಕೊಂಡು ದೇಶದಲ್ಲಿ ನರೇಂದ್ರ ಮೋದಿಯವರು ಕೆಲಸ ಮಾಡುತ್ತಿದ್ದಾರೆ. ಸ್ವದೇಶಿ ಉತ್ಪನ್ನಗಳಿಂದ ದೇಶದ ಹಲವಾರು ಜನರಲ್ಲಿ ಸ್ವಾಭಿಮಾನ ಮೂಡಿದೆ. ಆರ್ಟಿಕಲ್ 370 ತೆಗೆದು ಹಾಕಿದ್ದರಿಂದ ಬೆಳಗಾವಿ ಜನರು ಕೂಡಾ ಕಾಶ್ಮಿರಕ್ಕೆ ಹೊಗಿ ಆಸ್ತಿ ಖರೀದಿ ಮಾಡಬಹುದು, ಅದ್ದರಿಂದ ಕಾಶ್ಮೀರ ತುಂಬಾ ಅಭಿವೃದ್ಧಿ ಆಗಿದೆ. ಮುಂದಿನ ದಿನಗಳಲ್ಲಿ ಸ್ವಿಜರ್ಲ್ಯಾಂಡ್ ಹೋಗುವ ಬದಲು ನಾವು ಕಾಶ್ಮೀರಕ್ಕೆ ಹೋಗಿ ಪ್ರವಾಸ ಮಾಡಬಹುದು. ನಾವು ಪ್ರಣಾಳಿಕೆಯಲ್ಲಿ ಹೇಳಿದಂತೆ ಎಲ್ಲಾ ಕೆಲಸಗಳು ಆಗುತ್ತಿದೆ. ಅದಕ್ಕೆ ಉತ್ತಮ ಉದಾಹರಣೆ ಎಂದರೆ ಅದು ರಾಮಮಂದಿರ ನರ್ಮಾಣ ಮಾಡಿದ್ದು ಎಂದು ತಿಳಿಸಿದರು.

30 ವರ್ಷದ ನಂಟು ಬೆಳಗಾವಿ ಜೊತೆ ನನಗೆ ಇದೆ. ಮೊದಲ ಬಾರಿ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಪ್ರವಾಹದಿಂದ ಹಾನಿಯಾದ ಮನೆಗಳಿಗೆ ಪರಿಹಾರ ನೀಡಿದ್ದೇವೆ. ಎರಡನೆ ಸಲ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಸಂದರ್ಭದಲ್ಲಿ ಆಕ್ಸಿಜನ್ ನೀಡುವ ಕೆಲ ಮಾಡಿದ್ದೇವೆ ಎಂದು ತಿಳಿಸಿದರು. ಬೆಳಗಾವಿಯನ್ನು ಪ್ರಮಾಣಿಕವಾಗಿ ಅಭಿವೃದ್ಧಿ ಪಡಿಸಲು ಕೆಲಸ ಮಾಡುತ್ತೇನೆ. ಎಲ್ಲಾ ಹಂತದ ಯೋನೆಗಳನ್ನು ಜನರಿಗೆ ತಲುಪಿಸುವ ಕೆಲಸ ಮಾಡಿತ್ತೇವೆ. ಬೆಳಗಾವಿ ಅಭಿವೃದ್ಧಿಗೆ ಕಂಕಣಬದ್ದವಾಗಿ ಕೆಲಸ ಮಾಡುತ್ತೇವೆ ಎಂದು ತಳಿಸಿದರು.

ಉಡಾಣ ಯೋಜಯಡಿ ಮಂಗಳ ಅಂಡಿಯವರು ಎರಡನೆ ಟರ್ಮಿನಲ್ ಗಾಗಿ 310 ಕೊಟಿ ರೂ ವೆಚ್ಚದ ಕಾಮಗಾರಿಗೆ ಚಾಲನೆ ನೀಡಿದ್ದಾರೆ. ಬೆಂಗಳೂರನ್ನು ಬಿಟ್ಟರೆ ಬೆಳಗಾವಿ ವಿಮಾನ ನಲ್ದಾಣ ಅತ್ಯಂತ ಬ್ಯೂಜಿ ನಲ್ದಾಣ ಆಗಿದೆ. ಮುಂದಿನ ದಿನದಲ್ಲಿ ಅಂತರಾಷ್ಟ್ರಿಯ ವಿಮಾನ ನಲ್ದಾಣ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.ಈ ವೇಳೆ ಬಿಜೆಪಿ ಉಪಾದ್ಯಕ್ಷ ಅನಲ ಬೆನಕೆ, ಬಿಜೆಪಿ ರಾಜ್ಯ ವಕ್ತಾರ ಎಂ ಬಿ ಜಿರಳಿ, ಬಿಜೆಪಿ ನಗರ ಪ್ರಧಾನ ಕಾರ್ಯದರ್ಶಿ ಮುರಗೇಂದ್ರಗೌಡಾ ಪಾಟೀಲ್, ಬೆಳಗಾವಿ ವಕೀಲ ಸಂಘದ ಉಪದ್ಯಕ್ಷಾರಾದ ವಿಜಯ ಪಾಟೀಲ್ , ಬಸವರಾಜ ಮುಗಳಿ, ವಕೀಲರ ಸಂಘದ ಜನರಲ್ ಸಕ್ರೇಟ್ರಿ ಯಲ್ಲಪ್ಪ ದೇವಟೆ, ಹನಮಂತ ಕೊಂಗಾಲಿ ಸೇರಿದಂತೆ ನೂರಾಜನ ಉಪಸ್ಥಿತರಿದ್ದರು

# ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಿ;ಎಸಿ ಅಬೀದ್ ಗದ್ಯಾಳ್

ಇಂಡಿ: ಕುಡಿಯುವ ನೀರಿನ ತೊಂದರೆಯಾಗದಂತೆ ಕ್ರಮ ಕೈಗೊಂಡು, ಸಮಸ್ಯೆ ಉದ್ಭವಿಸಬಹುದು ಎಂದು ಗೊತ್ತಾದ ತಕ್ಷಣ ಟ್ಯಾಂಕರ್‌ಗೆ ಬೇಡಿಕೆ ಇಟ್ಟು ಪ್ರಸ್ತಾವನೆ ಕಳುಹಿಸಿ ಎಂದು ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ್ ಹೇಳಿದರು.

ಪಟ್ಟಣದ ಆಡಳಿತಸೌಧ ಸಭಾಭವನದಲ್ಲಿ ನಡೆದ ಟಾಸ್ಕಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈಗಾಗಲೇ ಬಹುತೇಕ ಹಳ್ಳಿಗಳಿಗೆ ಟ್ಯಾಂಕರ್ ನೀರು ಪೂರೈಕೆ ಮಾಡಲಾಗುತ್ತಿದೆ. ವಸತಿ ಪ್ರದೇಶಗಳಲ್ಲಿಯೂ ನೀರಿನ ಸಮಸ್ಯೆ ಉದ್ಭವಿಸುತ್ತಿರುವ ಬಗ್ಗೆ ಮಾಹಿತಿ ಲಭ್ಯವಾಗುತ್ತಿದೆ. ಜನ-ಜಾನುವಾರುಗಳಿಗೆ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ತೊಂದರೆಯಾಗದಂತೆ ಕ್ರಮ ಕೈಗೊಳ್ಳಿ ಎಂದು ಸಲಹೆ ನೀಡಿದರು.

ಕುಡಿಯಲು ನೀರು ಕೊಡುವುದು ಪುಣ್ಯದ ಕೆಲಸ ಗ್ರಾಮೀಣ ಪ್ರದೇಶಗಳಲ್ಲಿ ನಮ್ಮ ಬಾವಿ-ಕೊಳವೆ ಬಾವಿಗೆ ನೀರಿದ್ದರೆ ಬೇಸಿಗೆ ಮುಗಿಯುವವರೆಗೂ ನಮ್ಮೂರಿನ ಜನತೆಗೆಕುಡಿಯುವ ನೀರು ಕೊಟ್ಟು ಪುಣ್ಯ ಕಟ್ಟಿ ಕೊಳ್ಳಿ. ಗ್ರಾಮದಿಂದ ದೂರವಿದ್ದರೆ ಟ್ಯಾಂಕರ್ ಗಳಿಗಾದರೂ ನೀರು ತುಂಬಿಸಿಕೊಡಿ ಎಂದು ಗ್ರಾಮೀಣ ಭಾಗದ ಜನರಿಗೆ ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಮನವಿ ಮಾಡಿದರು.

ಈಗಾಗಲೆ ಟ್ಯಾಂಕರ್ ಮೂಲಕ ನೀರು ಪೂರೈಸಿದರೂ ಹೆಚ್ಚಿನ ಟ್ಯಾಂಕರ್‌ಗಳಿಗೆ ಬೇಡಿಕೆ ಬರುತ್ತಿದೆ. ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ನೋಡೆಲ್ ಅಧಿಕಾರಿಗಳು ಸ್ಥಾನಕ ಚೌಕಾಶಿ ಮಾಡಿ ಅವಶ್ಯವಿದ್ದಲ್ಲಿ ಪ್ರಸ್ತಾವನೆ ಕಳುಹಿಸಿ ಎಂದರು.

ತಹಸೀಲ್ದಾರ ಮಂಜುಳಾ ನಾಯಕ್, ತಾಪಂ ಇಒ,ಎಸ್.ಆರ್. ರುದ್ರವಾಡಿ, ಎಚ್.ಎಸ್. ಪಾಟೀಲ, ಮಹಾದೇವಪ್ಪ ಏವೂರ, ವೀಣಾ ಕೊಳೂರಗಿ, ಎಸ್.ಆರ್. ಮುಜಗೊಂಡ, ಎಚ್.ಎಸ್. ಗುನ್ನಾಪೂರ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು, ಪಿಡಿಓಗಳು ಇದ್ದರು.

# ಮತದಾರರು ಈ ಬಾರಿ 'ಕೈ' ಗೆ ಶಕ್ತಿ ನೀಡಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಕಾಂಗ್ರೆಸ್ ಪಂಚದ ಗ್ಯಾರಂಟಿಗಳ ಜೊತೆಗೆ ನಮ್ಮ ತಂದೆಯವರಾದ ಸತೀಶ ಜಾರಕಿಹೊಳಿಯವರು ಕ್ಷೇತ್ರದಲ್ಲಿ ಮಾಡಿದ ಅಭಿವೃದ್ಧಿ ಕಾಮಗಾರಿಗಳು ನಮಗೆ ಶ್ರೀರಕ್ಷೆಯಾಗಲಿದೆ. ಆದ್ದರಿಂದ ಮತದಾರರು ದೃಢ ನರ್ಧಾರ ಮಾಡಿ "ಕೈ "ಗೆ ಶಕ್ತಿ ನೀಡಬೇಕು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು. ಚಿಕ್ಕೋಡಿ ಲೋಕಸಭೆ ಚುನಾವಣೆಯ ಪ್ರಚಾರದ ಪ್ರಯುಕ್ತ ಯಮಕನಮರಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೊಸೂರ, ಗುಗ್ರ್ಯಾನಟ್ಟಿ, ಭೂತರಮನಹಟ್ಟಿ, ಗೋಡಿವಾಳ, ಉಕ್ಕಡ-ರಾಮದುರ್ಗ, ಬೊಮ್ಮನಹಟ್ಟಿ ಗ್ರಾಮದಲ್ಲಿ ಹಮ್ಮಿಕೊಂಡ ಲೋಕಸಭೆಯ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ದೇಶ ಕಟ್ಟುವಲ್ಲಿ ಕಾಂಗ್ರೆಸ್ ಪಕ್ಷ ಅಪಾರ ಕೊಡುಗೆ ನೀಡಿದೆ. ಬ್ಯಾಂಕ್ ರಾಷ್ಟ್ರೀಕರಣ, ಗರೀಬಿ ಹಠಾವೋ, ನೀರಾವರಿ, ರಸ್ತೆಗಳು, ಶಾಲಾ ಕಾಲೇಜು, ವಿಶ್ವ ವಿದ್ಯಾಲಯಗಳು, ಇಸ್ರೊ ಸಂಸ್ಥೆ ಕಟ್ಟುವಂತಹ ಹಲವಾರು ಕೆಲಸಗಳನ್ನು ಮಾಡಿದೆ. ಅಲ್ಲದೇ ಕಳೆದ ವಿಧಾನ ಸಭೆಯ ಚುನಾವಣೆಯಲ್ಲಿ ಕೊಟ್ಟ ಎಲ್ಲ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿ ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಈ ಭಾರಿ ಚಿಕ್ಕೋಡಿ ಸಮಗ್ರ ಅಭಿವೃದ್ಧಿಗೆ ನನಗೆ ಬೆಂಬಲಿ ನೀಡಿ, ನಮ್ಮ ತಂದೆಯವರಾದ ಸತೀಶ್ ಜಾರಕಿಹೊಳಿ ಅವರ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದರು.

ಯಮಕಣಮರಡಿ ಕ್ಷೇತ್ರವನ್ನು ಈಗಾಗಲೇ ಅಭಿವೃದ್ದಿಯತ್ತ ಕೊಂಡೊಯ್ಯಲಾಗುತ್ತಿದೆ. ಕಾಂಗ್ರೆಸ್ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಂತ ಪಕ್ಷ. ದೇಶಕ್ಕೆ ವಿದ್ಯುತ್, ಟಿವಿ, ಬಡವರಿಗೆ ಭೂಮಿ ನೀಡಿದ್ದು ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳನ್ನು ನೀಡಿದೆ. ಹಾಗಾಗಿ ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತಂದರೆ ಬಡವರಿಗೆ ಅನುಕೂಲವಾಗಲಿದೆ ಎಂದರು.

ಕೇಂದ್ರದಲ್ಲಿ ಹತ್ತು ವರ್ಷಗಳಿಂದ ಬಿಜೆಪಿ ಕೊಟ್ಟ ಭರವಸೆ ಜಾರಿ ಮಾಡಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ದೇಶದ ಪ್ರತಿ ಮಹಿಳೆಯರಿಗೆ 1 ಲಕ್ಷ ಕೊಡ್ತೇವೆ ಎಂದು ಈಗಾಗಲೇ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಘೋಷಣೆ ಮಾಡಿದ್ದಾರೆ. ಇದು ಕಾಂಗ್ರೆಸ್ ಪಕ್ಷದ ಬಡವರ ದಲಿತರ ಬಗ್ಗೆ ಇರುವ ಕಾಳಜಿ ಎಂದರು. ಈ ಬಾರಿ ಮತದಾರರು ಇಡಿ ಕ್ಷೇತ್ರ ಅಭಿವೃದ್ಧಿ ಮಾಡಲು ಕಾಂಗ್ರೆಸ್ ಗೆ ಬೆಂಬಲ ನೀಡುವ ಮೂಲಕ ನನಗೆ ತಮ್ಮ ಅಮೂಲ್ಯವಾದ ನೀಡಬೇಕು. ನಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕು. ನಮ್ಮ ಮನೆ-ಮಗಳನ್ನು ಕೈ ಹಿಡಿದು ನಡೆಸುವ ಜವಾಬ್ದಾರಿ ನಮ್ಮ ಮೇಲಿದೆ. ಈ ಕ್ಷೇತ್ರದಿಂದ ಆಯ್ಕೆಯಾದರೆ, ಹಗಲಿರುಳು ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ 